**All India Radio: Bangalore**
**National Bulletins In Kannada**
**02.06.2025 / 19.35 hrs**

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

**02.06.2025 / 19.35 hrs**

**<><*<><>*><>**

**ಮುಖ್ಯಾಂಶಗಳು**

**೧. ನವದೆಹಲಿಯಲ್ಲಿಂದು ಪೆರುಗ್ವೆ ಅಧ್ಯಕ್ಷರೊಂದಿಗೆ ಪ್ರಧಾನಿ ನರೇಂದ್ರ ಮೋದಿ ದ್ವಿಪಕ್ಷೀಯ ಮಾತುಕತೆ**

**೨. ದೇಶದಲ್ಲಿ ವಿದ್ಯುತ್ ಚಾಲಿತ ಪ್ರಯಾಣಿಕರ ಕಾರುಗಳ ಉತ್ಪಾದನೆ ಉತ್ತೇಜಿಸುವ ಯೋಜನೆಗೆ ಮಾರ್ಗಸೂಚಿ ಪ್ರಕಟಿಸಿದ ಕೇಂದ್ರ ಸರ್ಕಾರ**

**೩. ದೇಶದ ಕಲ್ಲಿದ್ದಲು ಉತ್ಪಾದನೆ, ಸರಬರಾಜಿನಲ್ಲಿ ಗಮನಾರ್ಹ ಬೆಳವಣಿಗೆ**

**೪. ಐಪಿಎಲ್ ಟಿ-೨೦ ಕ್ರಿಕೆಟ್; ನಾಳೆ ರಾಯಲ್ ಚಾಲೆಂಜರ್ಸ್ ಬೆಂಗಳೂರು - ಪಂಜಾಬ್ ಕಿಂಗ್ಸ್ ತಂಡಗಳ ನಡುವೆ ಫೈನಲ್ ಹಣಾಹಣಿ**

**<><*<><>*><>**

ವಿಶ್ವಸಂಸ್ಥೆ ಸೇರಿದಂತೆ ವಿವಿಧ ಬಹುಪಕ್ಷೀಯ ಸಂಸ್ಥೆಗಳಲ್ಲಿ ಸಾಮಾನ್ಯ ಆಸಕ್ತಿಯ ವಿಷಯಗಳಲ್ಲಿ ಒಟ್ಟಾಗಿ ಕೆಲಸ ಮಾಡುವುದನ್ನು ಮುಂದುವರಿಸಲು ಭಾರತ ಮತ್ತು ಪೆರುಗ್ವೆ ಇಚ್ಛೆ ವ್ಯಕ್ತಪಡಿಸಿವೆ. ಪ್ರಧಾನಿ ನರೇಂದ್ರ ಮೋದಿ ಮತ್ತು ಪೆರುಗ್ವೆ ಅಧ್ಯಕ್ಷ ಸ್ಯಾಂಟಿಯಾಗೊ ಪೆನಾ ಪಲಾಸಿಯೊಸ್ ಇಂದು ನವದೆಹಲಿಯಲ್ಲಿ ದ್ವಿಪಕ್ಷೀಯ ಸಭೆ ನಡೆಸಿದರು. ಈ ವೇಳೆ ವ್ಯಾಪಾರ, ರಕ್ಷಣೆ, ಆರೋಗ್ಯ ಮತ್ತು ಕೃಷಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ ಚರ್ಚಿಸಿದರು. ಸಭೆಯ ಕುರಿತು ಮಾಧ್ಯಮಗಳಿಗೆ ಮಾಹಿತಿ ನೀಡಿದ ವಿದೇಶಾಂಗ ಸಚಿವಾಲಯದ ಕಾರ್ಯದರ್ಶಿ ಪಿ.ಕುಮಾರನ್, ಡಿಜಿಟಲೀಕರಣ, ಐಸಿಟಿ ಮತ್ತು ಜನರಿಂದ ಜನರ ಸಂಪರ್ಕದಲ್ಲಿ ಸಹಕಾರವನ್ನು ಹೆಚ್ಚಿಸಲು ಎರಡೂ ದೇಶಗಳು ಕೆಲಸ ಮಾಡುತ್ತಿವೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ಡಿಜಿಟಲ್ ತಂತ್ರಜ್ಞಾನ, ಕೃಷಿ, ರಕ್ಷಣೆ, ರೈಲ್ವೆ, ಬಾಹ್ಯಾಕಾಶ ಸೇರಿದಂತೆ ಇತರೆ ಕ್ಷೇತ್ರಗಳಲ್ಲಿ ಎರಡೂ ದೇಶಗಳು ಸಾಕಷ್ಟು ಸಂಭಾವ್ಯ ಮಾರ್ಗಗಳನ್ನು ಹೊಂದಿವೆ ಎಂದು ಹೇಳಿದರು. ಭಯೋತ್ಪಾದನೆಯ ವಿರುದ್ಧದ ಹೋರಾಟದಲ್ಲಿ ಭಾರತ ಮತ್ತು ಪೆರುಗ್ವೆ ಒಟ್ಟಾಗಿವೆ ಎಂದು ಅವರು ಹೇಳಿದರು.

**ಧ್ವನಿ: ಪ್ರಧಾನಿ ನರೇಂದ್ರ ಮೋದಿ**

ಭಾರತಕ್ಕೆ ಮೂರು ದಿನಗಳ ಅಧಿಕೃತ ಭೇಟಿಯಲ್ಲಿರುವ ಪೆರುಗ್ವೆ ಅಧ್ಯಕ್ಷರು, ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಅವರನ್ನು ಭೇಟಿ ಮಾಡಿದರು. ಈ ವೇಳೆ ಅನೇಕ ಕ್ಷೇತ್ರಗಳಲ್ಲಿ ಭಾರತ- ಪೆರುಗ್ವೆ ಸಹಕಾರವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಮಾತುಕತೆ ನಡೆಸಿದರು. ಇದೇ ವೇಳೆ ಪೆರುಗ್ವೆ ಅಧ್ಯಕ್ಷರು, ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಅವರನ್ನೂ ಸಹ ಭೇಟಿಯಾಗಲಿದ್ದಾರೆ. ಪೆರುಗ್ವೆಗೆ ಹೊರಡುವ ಮುನ್ನ ಅವರು, ಬುಧವಾರ ಮುಂಬೈಗೆ ಭೇಟಿ ನೀಡಲಿದ್ದಾರೆ.

**<><*<><>*><>**

ದೇಶದಲ್ಲಿ ವಿದ್ಯುತ್ ಚಾಲಿತ ಪ್ರಯಾಣಿಕರ ಕಾರುಗಳ ಉತ್ಪಾದನೆ ಉತ್ತೇಜಿಸುವ ಯೋಜನೆಯ ಮಾರ್ಗಸೂಚಿಗಳನ್ನು ಕೇಂದ್ರ ಸರ್ಕಾರ ಪ್ರಕಟಿಸಿದೆ. ಈ ಕುರಿತು ನವದೆಹಲಿಯಲ್ಲಿ ಸುದ್ದಿಗಾರರಿಗೆ ಮಾಹಿತಿ ನೀಡಿದ ಕೇಂದ್ರ ಬೃಹತ್ ಕೈಗಾರಿಕಾ ಸಚಿವ ಎಚ್.ಡಿ.ಕುಮಾರಸ್ವಾಮಿ, ದೊಡ್ಡ ಅಂತಾರಾಷ್ಟ್ರೀಯ ಕಾರು ಬ್ರಾಂಡ್‌ಗಳನ್ನು ಆಕರ್ಷಿಸಲು ಭಾರತವು ಕನಿಷ್ಠ ೩೫ ಸಾವಿರ ಡಾಲರ್ ಮೌಲ್ಯದ ವಿದ್ಯುತ್ ಚಾಲಿತ ಕಾರುಗಳ ಮೇಲೆ ಶೇಕಡ ೧೫ ರಷ್ಟು ಕಡಿಮೆ ಪ್ರಮಾಣದಲ್ಲಿ ಆಮದು ತೆರಿಗೆಯನ್ನು ವಿಧಿಸುತ್ತಿದೆ ಎಂದು ಹೇಳಿದ್ದಾರೆ. ಕಂಪನಿಗಳು ದೇಶದಲ್ಲಿ ವಿದ್ಯುತ್ ಚಾಲಿತ ವಾಹನಗಳ ತಯಾರಿಕೆಗೆ ಹಾಗೂ ಹೂಡಿಕೆ ಮಾಡಲು ಒಪ್ಪಿಕೊಂಡರೆ ಮಾತ್ರ ಈ ಪ್ರಯೋಜನ ಲಭ್ಯವಾಗಲಿದೆ. ಯೋಜನೆಯ ನಿಬಂಧನೆಗಳಿಗೆ ಅನುಗುಣವಾಗಿ ಅನುಮೋದಿತ ಅರ್ಜಿದಾರರು ಕನಿಷ್ಠ ೪ ಸಾವಿರದ ೧೫೦ ಕೋಟಿ ರೂಪಾಯಿ ಹೂಡಿಕೆ ಮಾಡಬೇಕಾಗುತ್ತದೆ ಎಂದು ವಿವರಿಸಿದರು. ಈವರೆಗೆ ಮರ್ಸಿಡಿಸ್ ಬೆನ್ಸ್, ಕಿಯಾ, ಹುಂಡೈ ಮತ್ತು ಸ್ಕೋಡಾ ಕಂಪನಿಗಳು ಈ ಯೋಜನೆಯಲ್ಲಿ ಆಸಕ್ತಿ ತೋರಿಸಿವೆ. ಇದೇ ವೇಳೆ ದೇಶದ ಶೋರೂಂಗಳನ್ನು ಮಾತ್ರ ತೆರೆಯಲು ಟೆಸ್ಲಾ ಆಸಕ್ತಿ ತೋರಿದೆ ಎಂದು ಸಚಿವ ಎಚ್.ಡಿ.ಕುಮಾರಸ್ವಾಮಿ ಮಾಹಿತಿ ನೀಡಿದರು.

<><*<><>*><>

ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಇಂದು ಪ್ಯಾರಿಸ್‌ನಲ್ಲಿ ಉನ್ನತ ಜಾಗತಿಕ ಸಿಇಒಗಳನ್ನು ಭೇಟಿ ಮಾಡಿ, ವಿದ್ಯುತ್ ವಾಹನ ಮತ್ತು ನವೀಕರಿಸಬಹುದಾದ ಇಂಧನದಂತಹ ಭರವಸೆಯ ವಲಯಗಳಲ್ಲಿ ಭಾರತದ ಮಾರುಕಟ್ಟೆಗೆ ಅವರ ಭವಿಷ್ಯದ ಹೂಡಿಕೆ ಯೋಜನೆಗಳನ್ನು ಅನ್ವೇಷಿಸಿದರು.  ಫ್ರಾನ್ಸ್‌ಗೆ ಮೂರು ದಿನಗಳ ಭೇಟಿಯಲ್ಲಿರುವ ಸಚಿವರು, ನಾಳೆ ವಿಶ್ವ ವ್ಯಾಪಾರ ಸಂಸ್ಥೆಯ ಸಚಿವರ ಸಭೆಯಲ್ಲಿಯೂ ಭಾಗವಹಿಸಲಿದ್ದಾರೆ. ಫ್ರಾನ್ಸ್‌ನಲ್ಲಿ ತಮ್ಮ ಮೂರು ದಿನಗಳ ಕಾರ್ಯಕ್ರಮಗಳ ಸಮಯದಲ್ಲಿ, ಗೋಯಲ್ ಅವರು ಅಲ್ಲಿನ ಆರ್ಥಿಕ, ಹಣಕಾಸು ಮತ್ತು ಕೈಗಾರಿಕಾ ಸಚಿವ ಎರಿಕ್ ಲೊಂಬಾರ್ಡ್ ಮತ್ತು ಫ್ರೆಂಚ್ ವ್ಯಾಪಾರ ಸಚಿವ ಲಾರೆಂಟ್ ಸೇಂಟ್-ಮಾರ್ಟಿನ್ ಸೇರಿದಂತೆ ಹಲವರ ಜೊತೆಗೆ ದ್ವಿಪಕ್ಷೀಯ ಸಭೆಗಳನ್ನು ನಡೆಸಲಿದ್ದಾರೆ. ಚರ್ಚೆಗಳು ಇಂಡೋ-ಫ್ರೆಂಚ್ ಆರ್ಥಿಕ ಪಾಲುದಾರಿಕೆಯನ್ನು ಬಲಪಡಿಸುವ ಮತ್ತು ವ್ಯಾಪಾರ ಮತ್ತು ಹೂಡಿಕೆ ಸಹಕಾರವನ್ನು ಹೆಚ್ಚಿಸಲು ಹೊಸ ಮಾರ್ಗಗಳನ್ನು ಅನ್ವೇಷಿಸುವತ್ತ ಗಮನಹರಿಸುತ್ತವೆ. ಈ ಭೇಟಿಯು ಭಾರತ-ಫ್ರಾನ್ಸ್ ದುಂಡು ಮೇಜಿನ ಸಭೆ ಮತ್ತು ಭಾರತ-ಫ್ರಾನ್ಸ್ ಸಿಇಒ ವೇದಿಕೆಯನ್ನು ಸಹ ಒಳಗೊಂಡಿದೆ

<><*<><>*><>

ಕಳೆದ ವರ್ಷ ಮೇ ತಿಂಗಳಿಗೆ ಹೋಲಿಸಿದರೆ, ಪ್ರಸಕ್ತ ವರ್ಷದ ಮೇ ತಿಂಗಳಲ್ಲಿ ಭಾರತದ ಕಲ್ಲಿದ್ದಲು ಉತ್ಪಾದನೆ ಮತ್ತು ಸರಬರಾಜು ಸ್ಥಿರವಾದ ಬೆಳವಣಿಗೆ ಕಂಡುಬಂದಿದೆ.  ಈ ವರ್ಷದ ಮೇ ತಿಂಗಳಿನಲ್ಲಿ ದೇಶದಲ್ಲಿ ಒಟ್ಟಾರೆ ಕಲ್ಲಿದ್ದಲು ಉತ್ಪಾದನೆಯು ೮೬.೨೪ ಮೆಟ್ರಿಕ್ ಟನ್ ತಲುಪಿದೆ. ಕಳೆದ ವರ್ಷ ಇದೇ ಅವಧಿಯಲ್ಲಿ ೮೩.೯೬ ಮೆಟ್ರಿಕ್ ಟನ್ ಕಲ್ಲಿದ್ದಲು ಉತ್ಪಾದಿಸಲಾಗಿತ್ತು ಎಂದು ಕಲ್ಲಿದ್ದಲು ಸಚಿವಾಲಯ ತಿಳಿಸಿದೆ. ಕಳೆದ ತಿಂಗಳು ವಾಣಿಜ್ಯ ಗಣಿಗಳಿಂದ ೧೬.೯೩ ಮೆಟ್ರಿಕ್ ಟನ್ ಕಲ್ಲಿದ್ದಲು ಉತ್ಪಾದಿಸಲಾಗಿದೆ. ಕಳೆದ ವರ್ಷ ಇದೇ ಅವಧಿಗೆ ಹೋಲಿಸಿದರೆ, ಕಲ್ಲಿದ್ದಲು ಉತ್ಪಾದನೆಯಲ್ಲಿ ದಾಖಲೆಯ ೧೩.೮೩ ಮೆಟ್ರಿಕ್ ಟನ್ ಏರಿಕೆ ಕಂಡಿದೆ. ಇದೇ ವೇಳೆ ೨೦೨೫ರ ಮೇ ೩೧ರ ವೇಳೆಗೆ ಕಲ್ಲಿದ್ದಲು ಕಂಪನಿಗಳು ಹೊಂದಿರುವ ಕಲ್ಲಿದ್ದಲು ದಾಸ್ತಾನು ೧೨೨.೬೯ ಮೆಟ್ರಿಕ್ ಟನ್ ತಲುಪಿದೆ. ಕಳೆದ ವರ್ಷ ಇದೇ ಅವಧಿಯಲ್ಲಿ ೯೪.೯೮ ಮೆಟ್ರಿಕ್ ಟನ್ ಕಲ್ಲಿದ್ದಲು ದಾಸ್ತಾನು ಇತ್ತು. ಈ ಮೂಲಕ ಕಲ್ಲಿದ್ದಲು ದಾಸ್ತಾನಿನಲ್ಲಿ ಶೇಕಡ ೨೯.೧೮ ರಷ್ಟು ಏರಿಕೆ ದಾಖಲಾಗಿದೆ ಎಂದು ಸಚಿವಾಲಯ ಮಾಹಿತಿ ನೀಡಿದೆ.

<><*<><>*><>

ಕೇಂದ್ರ ಸರ್ಕಾರವು, ದೇಶದ ರೈತರ ಸಮೃದ್ಧಿಯನ್ನು ಖಚಿತಪಡಿಸಿಕೊಳ್ಳುವುದರ ಜೊತೆಗೆ ದೇಶದ ಆಹಾರ ಭದ್ರತೆಗೆ ಬದ್ಧವಾಗಿದೆ ಎಂದು ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಹೇಳಿದ್ದಾರೆ. ಬಿಹಾರದ ಮೋತಿಹಾರಿಯಲ್ಲಿ ನಡೆಯುತ್ತಿರುವ 'ವಿಕಸಿತ ಕೃಷಿ ಸಂಕಲ್ಪ' ಅಭಿಯಾನ ಅಡಿಯಲ್ಲಿ ನಡೆದ ಸಮಾರಂಭ ಉದ್ದೇಶಿಸಿ ಮಾತನಾಡಿದ ಅವರು, ರಾಷ್ಟ್ರವ್ಯಾಪಿ ನಡೆಯುತ್ತಿರುವ ವಿಕಸಿತ ಕೃಷಿ ಸಂಕಲ್ಪ ಅಭಿಯಾನವು ಇಂದು ಐದನೇ ದಿನಕ್ಕೆ ಕಾಲಿಟ್ಟಿದೆ. ಸರ್ಕಾರದ ವಿವಿಧ ಯೋಜನೆಗಳು ಮತ್ತು ಕಲ್ಯಾಣ ಕಾರ್ಯಕ್ರಮಗಳನ್ನು ಫಲಾನುಭವಿ ರೈತರ ಮನೆಯ ಬಾಗಿಲಿಗೆ ತಲುಪಿಸುವುದು ಈ ಅಭಿಯಾನದ ಪ್ರಮುಖ ಧ್ಯೇಯವಾಗಿದೆ ಎಂದರು. ನಕಲಿ ಕೀಟನಾಶಕಗಳ ವಿರುದ್ಧ ರೈತರ ಹಿತಾಸಕ್ತಿ ಕಾಪಾಡಲು ಹೊಸ ಕಾಯಿದೆ ತರಲಾಗುವುದು. ನಕಲಿ ಕೀಟನಾಶಕಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಸಚಿವ ಶಿವರಾಜ್ ಸಿಂಗ್ ಚೌಹಾಣ್ ತಿಳಿಸಿದರು.

<><*<><>*><>

ಮುಂದಿನ ೪ ದಿನಗಳಲ್ಲಿ ಈಶಾನ್ಯ ಭಾರತದಲ್ಲಿ ಭಾರೀ ಮಳೆಯಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಬುಧವಾರದವರೆಗೆ ಕರ್ನಾಟಕ, ಕೇರಳ ಮತ್ತು ಮಾಹೆಯಲ್ಲಿ ಗುಡುಗು ಸಹಿತ ಭಾರೀ ಮಳೆಯಾಗುವ ಸಾಧ್ಯತೆಯಿದೆ. ಇದೇ ವೇಳೆ ಜಮ್ಮು-ಕಾಶ್ಮೀರ, ಲಡಾಖ್, ಗಿಲ್‌ಗೆಟ್, ಬಾಲ್ಟಿಸ್ತಾನ್, ಮುಜಫರಾಬಾದ್, ಹಿಮಾಚಲ ಪ್ರದೇಶ, ಉತ್ತರಾಖಂಡ್, ಪಂಜಾಬ್, ಹರಿಯಾಣ, ಚಂಡೀಗಢ ಮತ್ತು ದೆಹಲಿಯ ಪ್ರತ್ಯೇಕ ಸ್ಥಳಗಳಲ್ಲಿ ಬುಧವಾರದವರೆಗೆ ತೀವ್ರ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

<><*<><>*><>

ಮುಂಬೈ ಷೇರುಮಾರುಕಟ್ಟೆಯಲ್ಲಿಂದು ಷೇರು ಸಂವೇದಿ ಸೂಚ್ಯಂಕ- ಸೆನ್ಸೆಕ್ಸ್ ೭೭ ಅಂಕಗಳು ಇಳಿಕೆಯಾಗಿದ್ದು, ದಿನದ ಅಂತ್ಯಕ್ಕೆ ೮೧ ಸಾವಿರದ ೩೭೪ ಅಂಕಗಳು ದಾಖಲಾಗಿದೆ. ಇದೇ ವೇಳೆ ರಾಷ್ಟ್ರೀಯ ಸಂವೇದಿ ಸೂಚ್ಯಂಕ- ನಿಫ್ಟಿ ೩೪ ಅಂಕಗಳು ಇಳಿಕೆ ಕಂಡಿದ್ದು, ದಿನದ ಅಂತ್ಯಕ್ಕೆ ೨೪ ಸಾವಿರದ ೭೧೬ ಅಂಕಗಳು ದಾಖಲಾಗಿದೆ. ವಿದೇಶಿ ವಿನಿಮಯ ಮಾರುಕಟ್ಟೆಯಲ್ಲಿಂದು ಅಮೆರಿಕನ್ ಡಾಲರ್ ಎದುರು ಭಾರತೀಯ ರೂಪಾಯಿ ೮೫ ರೂಪಾಯಿ ೩೮ ಪೈಸೆಯಷ್ಟಿದೆ.

<><*<><>*><>

ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಾಳೆ ನಡೆಯಲಿರುವ ೧೮ನೇ ಆವೃತ್ತಿಯ ಇಂಡಿಯನ್ ಪ್ರೀಮಿಯರ್ ಲೀಗ್ -ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯಾವಳಿಯ ಫೈನಲ್ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಾಗೂ ಪಂಜಾಬ್ ಕಿಂಗ್ಸ್ ತಂಡಗಳು ಪ್ರಶಸ್ತಿಗಾಗಿ ಸೆಣಸಲಿವೆ. ಪಂದ್ಯ ನಾಳೆ ರಾತ್ರಿ ೭.೩೦ ಕ್ಕೆ ಆರಂಭವಾಗಲಿದೆ.

<><*<><>*><>

ಆಸ್ಟ್ರೇಲಿಯಾದ ಸ್ಟಾರ್ ಆಲ್‌ರೌಂಡರ್ ಗ್ಲೆನ್ ಮ್ಯಾಕ್ಸ್‌ವೆಲ್ ಇಂದು ತಮ್ಮ ೧೩ ವರ್ಷಗಳ ಸುದೀರ್ಘ ಅಂತಾರಾಷ್ಟ್ರೀಯ ಏಕದಿನ ಕ್ರಿಕೆಟ್‌ಗೆ ನಿವೃತ್ತಿ ಘೋಷಿಸಿದ್ದಾರೆ. ಮ್ಯಾಕ್ಸ್‌ವೆಲ್ ೨೦೧೫ ಮತ್ತು ೨೦೨೩ ರಲ್ಲಿ ಎರಡು ಐಸಿಸಿ ವಿಶ್ವಕಪ್ ಪ್ರಶಸ್ತಿ ವಿಜೇತ ಆಸ್ಟ್ರೇಲಿಯಾ ತಂಡದ ಭಾಗವಾಗಿದ್ದರು. ಈ ವರ್ಷದ ಆರಂಭದಲ್ಲಿ ಚಾಂಪಿಯನ್ಸ್ ಟ್ರೋಫಿಯಲ್ಲಿ ಭಾರತ ವಿರುದ್ಧದ ಪಂದ್ಯ ಅವರ ಕೊನೆಯ ಏಕದಿನ ಪಂದ್ಯವಾಗಿತ್ತು. ಇನ್ನೊಂದೆಡೆ, ದಕ್ಷಿಣಾ ಆಫ್ರಿಕಾದ ವಿಕೆಟ್ ಕೀಪರ್ ಹೆನ್ರಿಚ್ ಕ್ಲಾಸೆನ್ ಅಂತಾರಾಷ್ಟ್ರೀಯ ಕ್ರಿಕೆಟ್‌ಗೆ ನಿವೃತ್ತಿ ಘೋಷಿಸಿದ್ದಾರೆ. ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಮಾಹಿತಿ ಹಂಚಿಕೊಂಡಿದ್ದಾರೆ.

<><*<><>*><>

ದಕ್ಷಿಣ ಕೊರಿಯಾದಲ್ಲಿ ಇತ್ತೀಚೆಗೆ ನಡೆದ ೨೦೨೫ ರ ಏಷ್ಯನ್ ಅಥ್ಲೆಟಿಕ್ಸ್ ಚಾಂಪಿಯನ್‌ಶಿಪ್‌ನಲ್ಲಿ ಭಾರತ ೮ ಚಿನ್ನ, ೧೦ ಬೆಳ್ಳಿ ಹಾಗೂ ೬ ಕಂಚಿನ ಪದಕ ಸೇರಿ ಒಟ್ಟು ೨೪ ಪದಕಗಳೊಂದಿಗೆ ೨ನೇ ಸ್ಥಾನ ಪಡೆದ ಭಾರತೀಯ ತಂಡದ ಪ್ರದರ್ಶನವನ್ನು ಪ್ರಧಾನಿ ನರೇಂದ್ರ ಮೋದಿ ಶ್ಲಾಘಿಸಿದ್ದಾರೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೬.೦೫ ಕ್ಕೆ <>*><>**